ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಪದವಿ ಕಾಲೇಜುಗಳಲ್ಲಿ ಪತ್ರಿಕೋದ್ಯಮ ಕೋರ್ಸ್ ಪ್ರಾರಂಭಿಸುವ ಬಗ್ಗೆ

ಡಾ|| ಚಂದ್ರಶೇಖರ ಬಿ ಪಾಟೀಲ್(ಪದವೀಧರ ಕ್ಷೇತ್ರ) -

18 (82) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದ ಯಾವ ಯಾವ ಪದವಿ ಕಾಲೇಜುಗಳಲ್ಲಿ ಪತ್ರಿಕೋದ್ಯಮ ಪದವಿ ಕೋರ್ಸ್‌ನ್ನು ಪರಿಚಯಿಸಲಾಗಿದೆ; ಸದರಿ ಕಾಲೇಜುಗಳಲ್ಲಿ ಭರ್ತಿ ಮಾಡಲಾಗಿರುವ ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಕಲ್ಯಾಣ ಕರ್ನಾಟಕದ ಎಷ್ಟು ಪದವಿ ಕಾಲೇಜುಗಳಲ್ಲಿ ಈ ಕೋರ್ಸ್‌ನ್ನು ಪರಿಚಯಿಸಲಾಗಿದೆ; ಬಹಳಷ್ಟು ಕಾಲೇಜುಗಳಲ್ಲಿ ಪರಿಚಯಿಸದಿರಲು ಕಾರಣವೇನು; ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ; ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು?